## ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ **ಕ್ರೈಸ್ತರ ಅಭಿವೃದ್ಧಿ ಯೋಜನೆಯಡಿ "ಬಿದಾಯಿ"** ಕಾರ್ಯಕ್ರಮಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 169 ಎಂಡಿಎಸ್ 2017, ದಿ: 06.04.2017

2) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿ: 13.10.2017

>>><<<

**ಪ್ರಸ್ತಾವನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2017-18ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಿ ಉಲ್ಲೇಖ (1)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ ಕ್ರೈಸ್ತರ ಅಭಿವೃದ್ಧಿ ಯೋಜನೆಯ ಸಹ ಮುಂದುವರೆಸಲಾಗಿದೆ. ಕ್ರೈಸ್ತರ ಅಭಿವೃದ್ಧಿ ಯೋಜನೆಯಡಿ ಬಿದಾಯಿ ಕಾರ್ಯಕ್ರಮವು ಸಹ ಒಂದಾಗಿರುತ್ತದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಯಗಳಿಗೆ 2017-18ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೂರನೇ ತ್ರೈಮಾಸಿಕ ಕಂತನ್ನು ಬಿಡುಗಡೆ ಮಾಡಿ ಉಲ್ಲೇಖ (2)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ದಿ: 23.10.2017 ರಂದು ಜಿಲ್ಲೆಗಳಿಂದ ಪಡೆದ ಮಾಹಿತಿಯನ್ವಯ ಬಿದಾಯಿ ಕಾರ್ಯಕ್ರಮದಡಿ ಕ್ರಿಶ್ಚಿಯನ್ ಫಲಾನುಭವಿಗಳ ಅರ್ಜಿಗಳು 1139 ಬಾಕಿ ಇರುತ್ತವೆ. ಸದರಿ ಅರ್ಜಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ.

ಕ್ರೈಸ್ತರ ಅಭಿವೃದ್ಧಿ ಯೋಜನೆಯಡಿ ಮೂರನೇ ಕಂತಿನ ಅನುದಾನ ರೂ. 2500.00 ಲಕ್ಷಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದ ಪೈಕಿ ಬಿದಾಯಿ ಕಾರ್ಯಕ್ರಮಕ್ಕಾಗಿ ರೂ 569.50 ಲಕ್ಷ (ರೂ ಐದು ಕೋಟಿ ಅರವತ್ತ ಒಂಬತ್ತು ಲಕ್ಷದ ಐವತ್ತು ಸಾವಿರಗಳು ಮಾತ್ರ)ಗಳನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

### ಆ ದೇ ಶ

**ಸಂಖ್ಯೆ: ಅಸಂನಿ/ಬಿದಾಯಿ/ಸಿಆರ್-1/2017-18** **ದಿನಾಂಕ: 24.10.2017**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕ್ರೈಸ್ತ ಸಮುದಾಯದ ಅಭಿವೃದ್ಧಿ ಯೋಜನೆಯಡಿ "ಬಿದಾಯಿ" ಕಾರ್ಯಕ್ರಮವನ್ನು ಜಾರಿಗೊಳಿಸಲು 2017-18ನೇ ಸಾಲಿನಲ್ಲಿ ಸರ್ಕಾರದಿಂದ ಬಿಡುಗಡೆಯಾದ ಮೂರನೇ ಕಂತಿನ ಅನುದಾನದಲ್ಲಿ ರೂ. 569.50 ಲಕ್ಷ (ರೂ. ಐದು ಕೋಟಿ ಅರವತ್ತ ಒಂಬತ್ತು ಲಕ್ಷದ ಐವತ್ತು ಸಾವಿರಗಳು ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧದಲ್ಲಿ ಆಯಾ ಜಿಲ್ಲೆ ಮುಂದೆ ತೋರಿಸಿರುವ ಮೊತ್ತವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ರವಾನಿಸಿದೆ.
ದಿನಾಂಕ 25/10/17